ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ 6ನೇ ಕ್ರಾಸ್ ಬೆಂಗಳೂರು-560003

(ಇತರೆ ಪರೀಕ್ಷೆಗಳು)

ಸಂಖ್ಯೆ:ವಿ1/ವಿಸಪ/ಅ.ಸೂ/01/2020

ದಿನಾಂಕ: 23-03-2020

## ಸುತ್ತೋಲೆ

ವಿಷಯ: ಮೇ-2020ರ ಮಾಹೆಯಲ್ಲಿ ನಡೆಯುವ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಗಳ ಅರ್ಜಿಗಳನ್ನು ಪರೀಕ್ಷಾ ಕೇಂದ್ರಗಳಲ್ಲಿ ಪರಿಶೀಲಿಸಿ ಅನುಮೋದನೆ ಮಾಡುವ ದಿನಾಂಕವನ್ನು ಮುಂದೂಡಿರುವ ಬಗ್ಗೆ

ಉಲ್ಲೇಖ: ಸರ್ಕಾರದ ಪತ್ರಸಂಖ್ಯೆ DD/SSV/COVID-19/17/2019-20 ದಿನಾಂಕ : 22-03-2020

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ದಂಡ ರಹಿತವಾಗಿ ದಿನಾಂಕ: 26-03-2020 ಹಾಗೂ ದಂಡ ಸಹಿತವಾಗಿ 31-03-2020ರವರೆಗೆ ದಿನಾಂಕಗಳನ್ನು ನಿಗಧಿ ಮಾಡಲಾಗಿತ್ತು. ಈ ದಿನಾಂಕಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ. ಸದರಿ ಅವಧಿಯಲ್ಲಿ ಅರ್ಜಿ ಸಲ್ಲಿಸಿ ಪರಿಶೀಲನೆ ಹಾಗೂ ಅನುಮೋದನೆಗಾಗಿ ಸಂಬಂಧಿಸಿದ ಪರೀಕ್ಷಾ ಕೇಂದ್ರಗಳಿಗೆ ಮುದ್ರಿತ ಅರ್ಜಿ ನಮೂನೆ ಹಾಗೂ ದಾಖಲೆಗಳನ್ನು ಸಲ್ಲಿಸಲು ದಿನಾಂಕ 09-04-2020ರವರೆಗೆ ನಿಗಧಿಪಡಿಸಲಾಗಿತ್ತು.

ಆದರೆ ಪ್ರಸ್ತುತ ಕರೋನ ವೈರಸ್ (ಕೋವಿಡ್-19) ಸೋಂಕು ತಡೆಗಟ್ಟುವ ಸಲುವಾಗಿ ಮುಂಜಾಗ್ರತಾ ಕ್ರಮವಾಗಿ ಶಾಲಾ ಕಾಲೇಜುಗಳಿಗೆ ದಿನಾಂಕ 31-03-2020ರವರೆಗೆ ರಜೆ ಘೋಷಿಸಿದ್ದು, ಈ ಸಮಯದಲ್ಲಿ ಪರೀಕ್ಷಾ ಕೇಂದ್ರಗಳಿಗೆ ಪರಿಶೀಲನೆಗಾಗಿ ಪಾಲಕರು ಹಾಗೂ ವಿದ್ಯಾರ್ಥಿಗಳು ಬೇಟಿ ನೀಡಬಾರದಾಗಿ ತಿಳಿಸಿದೆ. ಹಾಗೂ ಶಾಲಾ ಕಾಲೇಜುಗಳು ಪರಿಶೀಲನಾ ಕಾರ್ಯವನ್ನು ಪ್ರಾರಂಭಿಸಿದಾಗ ಎಲ್ಲಾ ಅಭ್ಯರ್ಥಿಗಳಿಗೆ ಅವರ ನೋಂದಾಯಿತ ಮೊಬೈಲ್ ಸಂಖ್ಯೆಗೆ SMS ಮೂಲಕ ಮಾಹಿತಿ ನೀಡಲಾಗುವುದು.

(ವಿ. ಸುಮಂಗಲ) 23/3

ನಿರ್ದೇಶಕರು, (ಇತರೆ ಪರೀಕ್ಷೆಗಳು)

ಪ್ರತಿಗಳು: ಮುಂದಿನ ಸೂಕ್ತ ಕ್ರಮಕ್ಕಾಗಿ,

1. ರಾಜ್ಯದ ಎಲ್ಲಾ ಡಯಟ್ ಪ್ರಾಂಶುಪಾಲರಿಗೆ,
2. ರಾಜ್ಯದ ಎಲ್ಲಾ ಸಂಗೀತ/ನೃತ್ಯ/ತಾಳವಾದ್ಯ ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರಿಗೆ
3. ಕಛೇರಿ ಪ್ರತಿ